ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ಬಸ್ಸು ನಿಲ್ದಾಣದಲ್ಲಿ ಆಹಾರ ಪದಾರ್ಥಗಳನ್ನು ಮಾರುತ್ತಿರುವ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :-

1003(1040) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೆಂಪೇಗೌಡ ಬಸ್ಸು ನಿಲ್ದಾಣ ಸೇರಿದಂತೆ ರಾಜ್ಯದ ಹೆಚ್ಚಿನ ಎಲ್ಲಾ ಬಸ್ಸು ನಿಲ್ದಾಣಗಳಲ್ಲಿ ಇರುವ ಆಹಾರೋತ್ಪನ್ನ ಮಳಿಗೆಗಳಲ್ಲಿ ತಿಂಡಿ-ತಿನಿಸು ಪಾನೀಯಗಳಿಗೆ ಮಾರುಕಟ್ಟೆ ದರಕ್ಕಿಂತ ಅಧಿಕ ದರ ವಿಧಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅಂತಹ ಮಳಿಗೆಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ತಿಂಡಿ-ತಿನಿಸು ಪಾನೀಯಗಳಿಗೆ ಮಾರುಕಟ್ಟೆ ದರಕ್ಕಿಂತ ಅಧಿಕ ದರ ವಿಧಿಸುತ್ತಿರುವ ಸರ್ಕಾರಿ ಬಸ್ಸು ನಿಲ್ದಾಣಗಳಲ್ಲಿರುವ ಮಳಿಗೆಗಳ ಲೈಸೆನ್ಸ್ ರದ್ದುಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಕಳೆದ 2 ವರ್ಷಗಳಲ್ಲಿ ಇಂತಹ ಎಷ್ಟು ಮಳಿಗೆಗಳ ಮೇಲೆ ದಾಳಿ ನಡೆಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಸರ್ಕಾರಿ ಬಸ್ಸು ನಿಲ್ದಾಣಗಳಲ್ಲಿರುವ ಮಳಿಗೆಗಳಲ್ಲಿ ಅವಧಿ ಮುಗಿದ ಕಳಪೆ ಗುಣಮಟ್ಟದ ಆಹಾರ ಪದಾರ್ಥಗಳನ್ನು ಮಾರಾಟ ಮಾಡುತ್ತಿದ್ದು ಈ ಕುರಿತು ಕಳೆದ 2 ವರ್ಷಗಳಲ್ಲಿ ಎಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)